# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಸಬಲೀಕರಣ ಅಧಿಕಾರಿ ಯನ್ನು ನೇಮಕ/ನಿಯೋಜನೆ ಮಾಡುವ ಬಗ್ಗೆ.

ಓದಲಾಗಿದೆ:
1. ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ, ಕಾರ್ಯದರ್ಶಿ, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ, ಭಾರತ ಸರ್ಕಾರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ನಂ.ಕೆ-11036/3/2021-ಎಸ್‌ಸಿಡಿ-ವಿ, ದಿನಾಂಕ:10-07-2023.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: SWD/EDU/ED3/107/2023, C.No.-1130641.

ಪರಿಶಿಷ್ಟ ಜಾತಿಯ (IX ಮತ್ತು X ತರಗತಿಗಳನ್ನು ಒಳಗೊಂಡು) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಯೋಜನೆ ಮತ್ತು ಪರಿಶಿಷ್ಟ ಜಾತಿಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರದ ಶಿಕ್ಷಣ/ಕಾಲೇಜು ಇಲಾಖೆ/ಸಮಾಜ ಕಲ್ಯಾಣ ಇಲಾಖೆಗಳು ಜಂಟಿಯಾಗಿ ಕಾಲವಿಳಂಬವಿಲ್ಲದೆ ಅನುಸರಿಸಬೇಕಾದ ಅಂಶಗಳನ್ನು ಗುರುತಿಸಿ ಎಲ್ಲಾ ರಾಜ್ಯಗಳಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ನಿರ್ದೇಶನ ನೀಡಲಾಗಿದೆ.

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಪ.ಜಾತಿ ಹಾಗೂ ಪ.ಪಂಗಡ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕಾಗಿಯೇ ಪ್ರತ್ಯೇಕವಾಗಿ ಪ್ರತಿ ಕಾಲೇಜು ಮಟ್ಟದಲ್ಲಿ ಹಾಗೂ ವಿಶ್ವವಿದ್ಯಾಲಯ ಮಟ್ಟದಲ್ಲಿ ಆಯಾಯ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಭೋದಕೇತರ ಅಧಿಕಾರಿಯನ್ನು "ಸಬಲೀಕರಣ ಅಧಿಕಾರಿ (Empowerment Officer)" ಯನ್ನಾಗಿ ನೇಮಿಸಲು/ನಿಯೋಜಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ:2 ರಲ್ಲಿ ಕೋರಿರುತ್ತಾರೆ.

ಆದ್ದರಿಂದ, ಪ್ರತಿ ಕಾಲೇಜು ಮಟ್ಟದಲ್ಲಿ ಹಾಗೂ ವಿಶ್ವವಿದ್ಯಾಲಯ ಮಟ್ಟದಲ್ಲಿ ಆಯಾಯ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ / ಭೋಧಕೇತರ ಅಧಿಕಾರಿಯನ್ನು "ಸಬಲೀಕರಣ ಅಧಿಕಾರಿ (Empowerment Officer)" ಯನ್ನಾಗಿ ನೇಮಿಸುವ/ನಿಯೋಜಿಸುವ ಕುರಿತು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 93 ಪಕವಿ 2023, ಬೆಂಗಳೂರು, ದಿನಾಂಕ: 07-08-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಎಲ್ಲಾ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ

----2

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ "ಸಬಲೀಕರಣ ಅಧಿಕಾರಿ (Empowerment Officer)" ನೇಮಿಸಿ/ನಿಯೋಜಿಸಿ, ಈ ಕೆಳಗಿನಂತೆ ಕ್ರಮವಹಿಸುವಂತೆ ಆದೇಶಿಸಿದೆ.

1. ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದಂತೆ ಪ್ರತಿ ಕಾಲೇಜಿನಲ್ಲಿ ಪ್ರತ್ಯೇಕವಾಗಿ "ಸಬಲೀಕರಣ ಕೇಂದ್ರ (Empowerment cell)" ಅನ್ನು ತೆರೆಯುವುದು. ಸದರಿ ಕೇಂದ್ರಕ್ಕೆ ಒಬ್ಬ ನುರಿತ ಬೋಧಕಾ/ಬೋಧಕೇತರ ಅಧಿಕಾರಿಯನ್ನು *"ಸಬಲೀಕರಣ ಅಧಿಕಾರಿ"* ಯನ್ನಾಗಿ ನಿಯೋಜಿಸುವುದು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಆದ್ಯ ಕರ್ತವ್ಯವಾಗಿರುತ್ತದೆ.

2. ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಲು ಕಂಡುಬರುತ್ತಿರುವ ಸಮಸ್ಯೆಗಳ ಸಂಬಂಧ ಇಲಾಖೆಯ ಕಛೇರಿ, ಇ-ಆಡಳಿತ ಕಛೇರಿ ಹಾಗೂ ಇನ್ನಿತರೆ ಕಛೇರಿಗಳನ್ನು ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ, ಮೊದಲಿಗೆ *"ಸಬಲೀಕರಣ ಅಧಿಕಾರಿ"* ಯು ಸಂಬಂಧಪಟ್ಟ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೈಕಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಹತೆಯನ್ನು ಹೊಂದಿರುವ ಬಗ್ಗೆ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ಅಗತ್ಯ ದಾಖಲಾತಿಗಳನ್ನು ಪರಿಶೀಲಿಸಿ "Eligible Students List" ಅನ್ನು ತಯಾರಿಸುವುದು.

3. "Eligible Students List" ನಲ್ಲಿನ ವಿದ್ಯಾರ್ಥಿಗಳು ಕಡ್ಡಾಯವಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸುವ ಸಂಬಂಧ ವಿದ್ಯಾರ್ಥಿವೇತನ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸಿ, ವಿದ್ಯಾರ್ಥಿಗಳು ಕಡ್ಡಾಯವಾಗಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸುವಂತೆ *"ಸಬಲೀಕರಣ ಅಧಿಕಾರಿ"* ಯು ಅಗತ್ಯ ಕ್ರಮವಹಿಸುವುದು.

4. ವಿದ್ಯಾರ್ಥಿಗಳು Online ಮೂಲಕ ಅರ್ಜಿ ಸಲ್ಲಿಸಲು ಸೂಕ್ತ ಅವಕಾಶವನ್ನು ಕಾಲೇಜಿನಲ್ಲಿಯೇ ಕಲ್ಪಿಸುವ ಸಂಬಂಧ, "ಸಬಲೀಕರಣ ಕೇಂದ್ರ (Empowerment cell)" ದಲ್ಲಿ ಕಂಪ್ಯೂಟರ್ ಮತ್ತು Internet ವ್ಯವಸ್ಥೆ ಒದಗಿಸುವುದು. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವಾಗ ಪ್ರತಿ ಹಂತದಲ್ಲಿಯೂ *"ಸಬಲೀಕರಣ ಅಧಿಕಾರಿ"* ಪರಿಶೀಲಿಸುವುದು ಹಾಗೂ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡುವುದು.

5. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಕಂಡುಬರುವ ತಾಂತ್ರಿಕ ಸಮಸ್ಯೆಗಳನ್ನು ವಿಶ್ವವಿದ್ಯಾಲಯದ ನೋಡಲ್ ಅಧಿಕಾರಿಗಳು, ಇ-ಆಡಳಿತ ಇಲಾಖೆ ಹಾಗೂ ಸಂಬಂಧಪಟ್ಟ ಅನುಷ್ಠಾನ ಇಲಾಖೆಯ ಗಮನಕ್ಕೆ ತರುವುದು *"ಸಬಲೀಕರಣ ಅಧಿಕಾರಿ"* ಕರ್ತವ್ಯವಾಗಿದ್ದು, ಯಾವುದೇ ಹಂತದಲ್ಲಿಯೂ ವಿದ್ಯಾರ್ಥಿಗಳನ್ನು ಕಾಲೇಜಿನಿಂದ ವಿಶ್ವವಿದ್ಯಾಲಯಕ್ಕಾಗಲೀ, ಇ-ಆಡಳಿತ ಇಲಾಖಾ ಕಛೇರಿ/ಇಲಾಖೆಯ ಕಛೇರಿಗಳಿಗೆ ಅಲೆದಾಡಲು ಆಸ್ಪದ ನೀಡದಂತೆ ಕ್ರಮವಹಿಸುವುದು.

6. ವಿದ್ಯಾರ್ಥಿಗಳು ಕಾಲೇಜಿಗೆ ದಾಖಲಾದ ದಿನದಂದೇ ವಿದ್ಯಾರ್ಥಿಯ Bonafide ವಿವರಗಳನ್ನು ವಿಶ್ವವಿದ್ಯಾಲಯಗಳ ಮೂಲಕ SSP ತಂತ್ರಾಂಶಕ್ಕೆ ವರ್ಗಾವಣೆ ಮಾಡಲು ಅಗತ್ಯ ಕ್ರಮವಹಿಸುವುದು.

7. ಕಾಲೇಜುವಾರು Bonafide ವಿವರಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ ಪಡೆದು ಪರಿಶೀಲಿಸಿ, ಸದರಿ ವಿವರಗಳಲ್ಲಿ ತಪ್ಪುಗಳು ಏನಾದರೂ ಇದ್ದಲ್ಲಿ, *"ಸಬಲೀಕರಣ ಅಧಿಕಾರಿ"* ಯೇ ವಿಶ್ವವಿದ್ಯಾಲಯ ಹಾಗೂ ಇತರೆ ಕಛೇರಿಗಳನ್ನು ಸಂಪರ್ಕಿಸಿ ಸರಿಪಡಿಸುವುದು.

8. ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಕೋರಿ ಅರ್ಜಿಯನ್ನು ಸಲ್ಲಿಸಿದ ನಂತರದಲ್ಲಿ, ವಿದ್ಯಾರ್ಥಿಗಳ ವಿವರಗಳನ್ನು ಒಳಗೊಂಡಂತೆ ಪಟ್ಟಿಯನ್ನು ತಯಾರಿಸಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸುವುದು ಹಾಗೂ ಸದರಿ ಅರ್ಜಿಗಳು ನಿಗದಿತ ಕಾಲದಲ್ಲಿ ಅನುಮೋದನೆಯಾಗುವಂತೆ ಹಿಂಬಾಲಿಕೆ ಕ್ರಮವಹಿಸುವುದು.

9. ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಂದ (ಭಾರತ ಸರ್ಕಾರದ ಮೆಟ್ರಿಕ್ ನಂತರದ ಮಾರ್ಗಸೂಚಿಯಂತೆ) (ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೇಲ್ಪಟ್ಟವರು ಹಾಗೂ ಮ್ಯಾನೇಜ್‌ಮೆಂಟ್ ಕೋಟಾದಡಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಸದರಿ ಯೋಜನೆಗೆ ಅರ್ಹತೆ ಪಡೆದಿರುವುದಿಲ್ಲ) ಆರಂಭದಲ್ಲಿ ಶುಲ್ಕ ಪಾವತಿಸುವಂತೆ ಒತ್ತಾಯ ಮಾಡದೆ Freeship card ಬಳಸಿ ದಾಖಲಾತಿಗೆ ಕ್ರಮವಹಿಸುವುದು.

10. ಸದರಿ ಸಬಲೀಕರಣ ಅಧಿಕಾರಿಗಳ ವಿವರಗಳನ್ನು SSP Portal ನಲ್ಲಿ ನಮೂದು ಮಾಡಲು ಕಾಲೇಜುವಾರು Login ಗಳನ್ನು ನೀಡಲು ಕಾರ್ಯಕ್ರಮ ನಿರ್ದೇಶಕರು, SSP ರವರಿಗೆ ಸೂಚಿಸಿದೆ.

11. ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಪರಿಣಾಮಕಾರಿಯನ್ನಾಗಿ ಅನುಷ್ಠಾನ ಮಾಡಲು ನಿಯೋಜಿತ ಅಧಿಕಾರಿಗಳಿಗೆ ಕಾಲಕಾಲಕ್ಕೆ ಸಮಾಜ ಕಲ್ಯಾಣ ಹಾಗೂ SSP ರವರು ಜಂಟಿಯಾಗಿ ತರಬೇತಿ ನೀಡಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಿವಶಂಕರ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ
7/8/2023

ಇವರಿಗೆ,

1) ಮಹಾಲೇಖಪಾಲರು ಲೆಕ್ಕ ಪತ್ರ: ಲೆಕ್ಕಪರಿಶೋಧನೆ) ಪಾರ್ಕ್ ರಸ್ತೆ, ಬೆಂಗಳೂರು.

----4

2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಉನ್ನತ ಶಿಕ್ಷಣ, ತಾಂತ್ರಿಕ ಶಿಕ್ಷಣ ) ಬಹುಮಹಡಿಗಳ ಕಟ್ಟಡ , ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ , ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು(ಉನ್ನತ ಶಿಕ್ಷಣ ಇಲಾಖೆಯ ಮುಖಾಂತರ)
6) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
8) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
9) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
10)ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
11) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
12)ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ(ಇ-ಆಡಳಿತ), ಬೆಂಗಳೂರು.
13)ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.
14)ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ(ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
15)ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂ. ಇವರ ಮುಖಾಂತರ)
16)ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ :

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/21/ಮೆಟ್ರಿ.ವಿ.ವೇ/2023-24/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು.ದಿನಾಂಕ:10.08.2023.

**ಪರಿಚಲನಾ ಆದೇಶ**

ಇಲಾಖಾ ವ್ಯಾಪ್ತಿಯಡಿ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಪರಿಶಿಷ್ಟ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ಕಾಲೇಜುಗಳಲ್ಲಿ ಸಬಲೀಕರಣ ಅಧಿಕಾರಿಯನ್ನು ನೇಮಕ/ನಿಯೋಜನೆ ಮಾಡುವುದಕ್ಕೆ ಸಂಬಂದಿಸಿದಂತೆ ದಿನಾಂಕ:07.08.2023 ರಂದು ಸಮಾಜ ಕಲ್ಯಾಣ ಇಲಾಖೆಯಿಂದ ಹೊರಡಿಸಲಾದ ಸರ್ಕಾರಿ ಆದೇಶ ಸಂಖ್ಯೆ:ಸಕವಿ 93 ಪದವಿ 2023, ಅನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು.